**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಯು. ಬಿ. ವೆಂಕಟೇಶ್ ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾಹಿತಿ**

**ವಿಷಯ:- ಬೆಂಗಳೂರು ನಗರದ ಬಸವನಗುಡಿಯಲ್ಲಿರುವ ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ಠೇವಣಿದಾರರ ಹಣವನ್ನು ಅವ್ಯವಹಾರದ ಮೂಲಕ ಮೋಸ ಮಾಡಿರುವ ಕುರಿತು ಕಳೆದ 2 ವರ್ಷಗಳಿಂದ ಸದನದ ಒಳಗೆ ಮತ್ತು ಹೊರಗೆ ಹಲವಾರು ಬಾರಿ ಒತ್ತಾಯಿಸಿದರು ಸದರಿ ಪ್ರಕರಣದಲ್ಲಿ ಆಶಾದಾಯಕ ಬೆಳವಣಿಗೆಯಾಗಿರುವುದಿಲ್ಲ. ಈ ಬಗ್ಗೆ ಪ್ರಶ್ನಿಸಿ ಸದರಿ ಪ್ರಕರಣವನ್ನು ಸಿ.ಬಿ.ಐ. ತನಿಖೆಗೆ ಒಳಪಡಿಸುವಂತೆ ಒತ್ತಾಯಿಸಿದರು ಈವರೆಗೆ ಸದರಿ ಪ್ರಕರಣವನ್ನು ಸಿ. ಬಿ. ಐ. ವಹಿಸದಿರುವ ಕುರಿತು ಮಾನ್ಯ ಸಹಕಾರ ಸಚಿವರ ಗಮನವನ್ನು ನಿಯಮ 72 ರಡಿಯಲ್ಲಿ ಸೆಳೆಯಬಯಸುತ್ತೇನೆ.**

**ಉತ್ತರ:**

ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್, ಬೆಂಗಳೂರು, ಈ ಬ್ಯಾಂಕಿನ ಅವ್ಯವಹಾರದ ಪ್ರಮಾಣವು ಅಗಾಧವಾಗಿದ್ದು, ಬ್ಯಾಂಕಿನ ಪದಾಧಿಕಾರಿಗಳು, ಆಡಳಿತ ಮಂಡಳಿ ನಿರ್ದೇಶಕರುಗಳು ಹಾಗೂ ಮುಖ್ಯಕಾರ್ಯನಿರ್ವಹಣಾಧಿಕಾರಿಯವರು ಸಾರ್ವಜನಿಕರಿಂದ ಅಪಾರ ಪ್ರಮಾಣದಲ್ಲಿ ಹಣವನ್ನು ಠೇವಣಿ ರೂಪದಲ್ಲಿ ಸಂಗ್ರಹಿಸಿ ವಾಪಸ್ಸು ನೀಡದೇ ವಂಚನೆ ಎಸಗಿದ್ದು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುವ ಅಗತ್ಯತೆ ಇರುವುದರಿಂದ ಈ ಪ್ರಕರಣದ ವಿಚಾರಣೆಯನ್ನು ಸಿ ಬಿ ಐ ಗೆ ವಹಿಸುವ ಬಗ್ಗೆ ದಿನಾಂಕ:17-01-2023 ರಂದು ಮಾನ್ಯ ಸಹಕಾರ ಸಚಿವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ.

ಈ ಸಂಬಂಧ ನಿಬಂಧಕರಿಂದ ದಿನಾಂಕ:09-02-2023ರಂದು ಸ್ವೀಕೃತವಾಗಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಒಳಾಡಳಿತ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಒಳಾಡಳಿತ ಇಲಾಖೆಯು ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿ/ದಾಖಲೆಗಳನ್ನು ಆಂಗ್ಲ ಭಾಷೆಯಲ್ಲಿ ಸಲ್ಲಿಸುವಂತೆ ಸೂಚಿಸಿದ್ದರ ಹಿನ್ನೆಲೆಯಲ್ಲಿ ದಿನಾಂಕ:04-05-2023 ರಂದು ಸಂಪೂರ್ಣ ದಾಖಲೆಗಳನ್ನು ಆಂಗ್ಲ ಭಾಷೆಗೆ ಅನುವಾದಿಸಿಕೊಡುವಂತೆ ನಿರ್ದೇಶಕರು, ಭಾಷಾಂತರ ಇಲಾಖೆ, ಬೆಂಗಳೂರು, ಇವರಿಗೆ ನಿಬಂಧಕರ ಹಂತದಲ್ಲಿ ಪತ್ರ ಬರೆಯಲಾಗಿತ್ತು.

ಭಾಷಾಂತರ ಇಲಾಖೆ ನಿರ್ದೇಶಕರು ಭಾಷಾಂತರಕ್ಕೆ ನೀಡಿರುವ ದಾಖಲೆಗಳು ಅಗಾಧವಾಗಿದ್ದು, ಮಾನವ ಸಂಪನ್ಮೂಲದ ಕೊರತೆ ಇರುವುದರಿಂದ, ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಭಾಷಾಂತರಕಾರರನ್ನು ಸಂಪರ್ಕಿಸಿ, ಭಾಷಾಂತರಕ್ಕೆ ತಗಲುವ

ಖರ್ಚುವೆಚ್ಚಗಳನ್ನು ತಮ್ಮ ಇಲಾಖೆಯೇ ಭರಿಸಿ ಅನುವಾದ ಕಾರ್ಯ ಮಾಡಿಕೊಳ್ಳಬೇಕೆಂದು ಹಿಂಬರಹ ನೀಡಿರುತ್ತಾರೆ.

ಈ ಹಿನ್ನೆಲೆಯಲ್ಲಿ ದಿನಾಂಕ:19-06-2023 ರಂದು ಬ್ಯಾಂಕಿಗೆ ಸಂಬಂಧಿಸಿದ ದಾಖಲೆಗಳನ್ನು ಆಂಗ್ಲ ಭಾಷೆಗೆ ಅನುವಾದಿಸಲು ಸರ್ಕಾರ ಹೊರಡಿಸಿರುವ ಅಧಿಸೂಚಿತ ಭಾಷಾಂತರಕಾರರಿಗೆ ನೀಡಲಾಗಿದೆ. 500 ಪುಟಗಳ ದಾಖಲೆಗಳು ಆಂಗ್ಲ ಭಾಷೆಗೆ ತರ್ಜುಮೆಗೊಂಡ ನಂತರ ಅಗತ್ಯ ಕ್ರಮ ವಹಿಸಲಾಗುವುದು.

**ಸಂಖ್ಯೆ: ಸಿಒ 40 ಸಿಆರ್‌ಸಿ 2023**

K. N. Rajanna

**(ಕೆ.ಎನ್.ರಾಜಣ್ಣ)**
ಸಹಕಾರ ಸಚಿವರು